ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಶಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 8/7/2020

# ಸೋಂಕು ಏರಿಕೆ ನಡುವೆ ಕೇಂದ್ರದಿಂದ ಶಹಬ್ಬಾಷ್‌ಗಿರಿ

## ಸಂಖ್ಯೆಯ ಬಗ್ಗೆ ಚಿಂತಿಸಬೇಡಿ, ಸೂಕ್ತ ಚಿಕಿತ್ಸೆ ನೀಡುವತ್ತ ಗಮನಹರಿಸಿ

8/7/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯದಲ್ಲಿ ಒಂದೆಡೆ ದಿನದಿಂದ ದಿನಕ್ಕೆ ಕರೋನಾ ಸೋಂಕು ಏರುತ್ತಿದೆ. ರಾಜ್ಯದಲ್ಲಿ ಮೃತರ ಸಂಖ್ಯೆಯಲ್ಲೂ ಏರಿಕೆಯಾಗಿದೆ. ಇಷ್ಟಾದರೂ ಕೇಂದ್ರ ಸರಕಾರ ಮಾತ್ರ ರಾಜ್ಯ ಸರಕಾರಕ್ಕೆ ಶಹಬ್ಬಾಷ್‌ಗಿರಿ ನೀಡಿದ್ದು, ರಾಜ್ಯದ ಜನರಿಗೆ ಅಚ್ಚರಿ ಮೂಡಿಸಿದೆ.

ಕರ್ನಾಟಕ ಸರಕಾರ ಕರೋನಾ ನಿಯಂತ್ರಣದಲ್ಲಿ ತಗೆದುಕೊಂಡಿರುವ ಕ್ರಮಗಳ ಬಗ್ಗೆ ಕೇಂದ್ರ ಸರಕಾರದ ತಂಡ ಮೆಚ್ಚುಗೆ ವ್ಯಕ್ತಪಡಿಸಿದೆ. ಮಂಗಳವಾರ ಆಗಮಿಸಿದ್ದ ಕೇಂದ್ರ ಸರಕಾರದ ತಂಡ ಮುಖ್ಯಮಂತ್ರಿ ಯಡಿಯೂರಪ್ಪ ಅವರ ನೇತೃತ್ವದ ರಾಜ್ಯ ಸರಕಾರದ ಸಮಿತಿಯೊಂದಿಗೆ ಸಭೆ ನಡೆಸಿತ್ತು. ಈ ವೇಳೆ ರಾಜ್ಯ ಸರಕಾರ ಕರೋನಾ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮ, ತಂತ್ರಜ್ಞಾನದ ಬಳಕೆ ಹಾಗೂ ಕರೋನಾ ಟೆಸ್ಟ್‌ನಲ್ಲಿ ಸಾಧಿಸುವ ಸಾಧನೆಗೆ ಈ ತಂಡ ತೃಪ್ತಿಪಟ್ಟಿದೆ. ಪ್ರಮುಖವಾಗಿ ಈ ತಂಡ, ಇತರ ರಾಜ್ಯಗಳ ಅಂಕಿ-ಅಂಶವನ್ನು ಕರ್ನಾಟಕದ ಅಂಕಿ-ಅಂಶದೊಂದಿಗೆ ತಾಳೆ ಹಾಕಿದೆ. ಆದ್ದರಿಂದಲೇ ಸರಕಾರ ಕರೋನಾ ನಿಯಂತ್ರಣಕ್ಕೆ ಕೈಗೊಂಡಿರುವ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದೆ.

ಕೇಂದ್ರದಿಂದ ಆಗಮಿಸಿದ ತಂಡಕ್ಕೆ ರಾಜ್ಯ ಸರಕಾರದ ಪರವಾಗಿ ಕರ್ನಾಟಕದಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡಲಾಗಿದೆ. ಇತರ ರಾಜ್ಯಗಳಿಗೆ ಹೋಲಿಸಿದರೆ, ಕರ್ನಾಟಕದಲ್ಲಿ ಕರೋನಾ ಟೆಸ್ಟ್ ತಂತ್ರಜ್ಞಾನದ ಬಳಕೆ ಹಾಗೂ ಪ್ರಾಥಮಿಕ, ದ್ವಿತೀಯ ಸಂಪರ್ಕಿತರ ವ್ಯಕ್ತಿಗಳನ್ನು ಪತ್ತೆ ಹಚ್ಚುತ್ತಿರುವ ಕೆಲಸಕ್ಕೆ ತಂಡ ಮೆಚ್ಚುಗೆ ವ್ಯಕ್ತಪಡಿಸಿದೆ ಎಂದು ಮೂಲಗಳು ತಿಳಿಸಿವೆ.



ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಕೇಂದ್ರ ತಂಡದೊಂದಿಗೆ ಚರ್ಚಿಸುತ್ತಿರುವ ಸಿಎಂ ಯಡಿಯೂರಪ್ಪ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಶ್ರೀರಾಮುಲು ಮತ್ತಿತರರು.

**ಮರಣ ಸಂಖ್ಯೆ ಬಗ್ಗೆ ಎಚ್ಚರವಿರಲಿ:** ಈ ಮೆಚ್ಚುಗೆಯ ಜತೆಗೆ ರಾಜ್ಯ ಸರಕಾರ ಎಡವುತ್ತಿರುವ ಬಗ್ಗೆಯೂ ಕೇಂದ್ರದಿಂದ ಆಗಮಿಸಿದ್ದ ತಂಡ ಎಚ್ಚರಿಕೆ ನೀಡಿದೆ. ರಾಜ್ಯದಲ್ಲಿ ಕರೋನಾ ಸೋಂಕು ಹೆಚ್ಚಾಗಿರುವ ಬಗ್ಗೆ ಆತಂಕ ಬೇಡ. ಆದರೆ ಕಳೆದೊಂದು ವಾರದಲ್ಲಿ ದೊಡ್ಡ ಪ್ರಮಾಣದಲ್ಲಿ ಸೋಂಕಿಗೆ ಸಾಯುವವರ ಸಂಖ್ಯೆ ಹೆಚ್ಚಾಗಿದೆ. ಈ ಬಗ್ಗೆ ಎಚ್ಚರವಹಿಸಬೇಕು. ಇದರೊಂದಿಗೆ ಇತ್ತೀಚಿನ ದಿನಗಳಲ್ಲಿ ಸಮಯಕ್ಕೆ ಸರಿಯಾಗಿ ಆ್ಯಂಬುಲೆನ್ಸ್ ಹಾಗೂ ಆಸ್ಪತ್ರೆಯಲ್ಲಿ ಬೆಡ್‌ಗಳು ಸಿಗುತ್ತಿಲ್ಲ ಎನ್ನುವ ಆರೋಪ ಕೇಳಿಬರುತ್ತಿವೆ. ಈ ಬಗ್ಗೆ ಎಚ್ಚರವಹಿಸುವಂತೆ ಸೂಚನೆ ನೀಡಿದೆ ಎನ್ನಲಾಗಿದೆ.

ಕೇಂದ್ರದಿಂದ ಆಗಮಿಸಿದ್ದ ತಂಡದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಆ ಅಹುಜಾ, ಇಎಂಆರ್ ನಿರ್ದೇಶಕ ರವೀಂದ್ರನ್ ಇದ್ದರು.

> ಕರೋನಾ ನಿಯಂತ್ರಣದಲ್ಲಿ ರಾಜ್ಯ ಸರಕಾರ ತಗೆದುಕೊಂಡಿರುವ ಕ್ರಮಗಳ ಬಗ್ಗೆ ಕೇಂದ್ರದ ತಂಡ ಮೆಚ್ಚುಗೆ ವ್ಯಕ್ತಪಡಿಸಿದೆ. ಆದರೆ ಸಾವಿನ ಸಂಖ್ಯೆ ಹಾಗೂ ಚಿಕಿತ್ಸೆಯ ವಿಚಾರವಾಗಿ ಕೆಲವು ಸಲಹೆಗಳನ್ನು ನೀಡಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮವಹಿಸಲಾಗುವುದು.
>
> **- ಶ್ರೀರಾಮುಲು** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ

### ಕೇಂದ್ರದ ಪಂಚ ಸಲಹೆಗಳೇನು?

- ಕಂಟೇನ್‌ಮೆಂಟ್ ಝೋನ್‌ನಲ್ಲಿ ಮತ್ತಷ್ಟು ಕರೋನಾ ಟೆಸ್ಟ್ ತೀವ್ರಗೊಳಿಸಬೇಕು
- 50ಕ್ಕಿಂತ ಹೆಚ್ಚು ವಯೋಮಾನದವರನ್ನು ಮನೆಯಿಂದ ಆಚೆ ಬಾರದ ರೀತಿ ನೋಡಿಕೊಳ್ಳಬೇಕು
- ಕರೋನಾ ಸೋಂಕು ಪ್ರಮಾಣ ಹೆಚ್ಚಾಗುತ್ತಿದ್ದಂತೆ ಆತಂಕಕ್ಕೆ ಒಳಗಾಗುವ ಬದಲು, ಚಿಕಿತ್ಸೆ ನೀಡಬೇಕು
- ಸೋಂಕಿತರಿಗೆ ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ನೀಡುವುದಕ್ಕೆ ಬೇಕಿರುವ ಸಿದ್ಧತೆ ಮಾಡಿಕೊಳ್ಳಬೇಕು
- ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಕರೋನಾದಿಂದ ಮರಣ ಹೊಂದುವವರ ಪ್ರಮಾಣ ಹೆಚ್ಚಾಗಿದೆ. ಆದ್ದರಿಂದ ಮರಣ ಪ್ರಮಾಣ ತಗ್ಗಿಸಲು ಕ್ರಮವಹಿಸಬೇಕು.